ಪ್ರಶ್ನೆಗಳ 15ನೇ ಪಟ್ಟಿಯಲ್ಲಿರುವ ಒಟ್ಟು 89 ಪ್ರಶ್ನೆಗಳ ಪೈಕಿ 68 ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡುವ ಉತ್ತರವನ್ನು ಸಭೆಯ ಮುಂದಿಡುತ್ತೇನೆ.

ವಿಷಯ: ತುಂಗಾ ಮೇಲ್ದಂಡೆ ಯೋಜನೆಯಲ್ಲಿ ಶಿವಮೊಗ್ಗದಿಂದ ತೀರ್ಥಹಳ್ಳಿವರೆಗೆ ರಸ್ತೆ ಮುಳುಗಡೆ.

854 (1245)

ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ): ಮಾನ್ಯ ಬೃಹತ್ ನೀರಾವರಿ ಮಂತ್ರಿಗಳು ಈ ಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಂಗ ಮೇಲ್ದಂಡೆ ಯೋಜನೆಯಲ್ಲಿ ಶಿವಮೊಗ್ಗದಿಂದ ತೀರ್ಥಹಳ್ಳಿಗೆ ಹೋಗುವ ಎಷ್ಟು ಕಿ.ಮೀ. ರಸ್ತೆ ಮುಳುಗಿದೆ.

ಆ) ಈ ರಸ್ತೆಗಳ ಅಭಿವೃದ್ಧಿಯ ಬಗ್ಗೆ ಇದುವರೆಗು ಏನು ಕ್ರಮ ಕೈಗೊಳ್ಳಲಾಗಿದೆ ಹಾಗೂ ಎಷ್ಟು ಹಣ ಖರ್ಚು ಮಾಡಲಾಗಿದೆ.

ಇ) ಈಗಾಗಲೇ ರಸ್ತೆ ದುರಸ್ಥಿ ಕಾಮಗಾರಿ ನಿಧಾನಗತಿಯಿಂದ ನಡೆಯುತ್ತಿದ್ದು, ಸದ್ಯ ಮಳೆಗಾಲ ಆರಂಭವಾಗುವುದರಿಂದಾಗಿ ಈ ಭಾಗದ ವಾಹನ ಸಂಚಾರಕ್ಕೆ ತೊಂದರೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ ಯಾವಾಗ ರಸ್ತೆ ದುರಸ್ಥಿ ಕೆಲಸ ಮುಗಿಸಲಾಗುವುದು?

ಶ್ರೀ ಕೆ.ಎನ್. ನಾಗೇಗೌಡ (ಬೃಹತ್ ನೀರಾವರಿ ಮಂತ್ರಿಗಳು):

ಅ) 1.2 ಕಿ.ಮೀ. ಗಳೆಂದು ಅಂದಾಜಿಸಲಾಗಿದೆ.

ಆ) ಟೆಂಡರ್ ಆಧಾರದ ಮೇಲೆ ಕೆಲಸವು ಪ್ರಗತಿಯಲ್ಲಿದೆ. ಇಲ್ಲಿಯವರೆಗೂ ಆದ ಒಟ್ಟು ಖರ್ಚು ರೂ. 5.65 ಲಕ್ಷಗಳು.

ಇ) ರಸ್ತೆ ಸುಧಾರಣೆ ಕೆಲಸವು ಈಗಾಗಲೇ ಪ್ರಗತಿಯಲ್ಲಿದ್ದು, ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ಮಳೆಗಾಲ ಪ್ರಾರಂಭವಾಗುವುದರೊಳಗೆ ಮುಗಿಸಲು ಕ್ರಮ ಕೈಗೊಳ್ಳಲಾಗುವುದು.

ವಿಷಯ: ಬಳ್ಳಾರಿ ಜಿಲ್ಲೆಯಲ್ಲಿ 5ನೇ ಪೋಲೀಸ್ ಬೆಟಾಲಿಯನ್ ಪ್ರಾರಂಭ

855 (1317)

ಶ್ರೀ ಅಲ್ಲಂ ವೀರಭದ್ರಪ್ಪ (ಕುರುಗೋಡು): ಮಾನ್ಯ ಗೃಹ ಮತ್ತು ವಕ್ಫ್ ರಾಜ್ಯ

ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಬಳ್ಳಾರಿ ಜಿಲ್ಲೆಯಲ್ಲಿ 5ನೇ ಪೊಲೀಸ್ ಬೆಟಾಲಿಯನ್ ಪ್ರಾರಂಭಿಸಲು ಸರ್ಕಾರದವರು ಈಗಾಗಲೇ ನಿರ್ಧರಿಸಿರುವುದು ನಿಜವಲ್ಲವೇ?

2) ಹಾಗಿದ್ದಲ್ಲಿ ಈ ಬೆಟಾಲಿಯನ್‌ನನ್ನು ಪ್ರಾರಂಭಿಸಲಾಗಿದೆಯೇ?

3) ಇಲ್ಲದಿದ್ದಲ್ಲಿ ಇದಕ್ಕೆ ಕಾರಣಗಳೇನು?

4) ಹಾಗಿದ್ದಲ್ಲಿ ಇದನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಆರ್.ರೋಷನ್ ಬೇಗ್ (ಗೃಹ ಮತ್ತು ವಕ್ಫ್ ರಾಜ್ಯ ಸಚಿವರು):

1) ಇಲ್ಲ.

2) ಉದ್ಭವಿಸುವುದಿಲ್ಲ.

3) ಉದ್ಭವಿಸುವುದಿಲ್ಲ.

4) ಉದ್ಭವಿಸುವುದಿಲ್ಲ.

ವಿಷಯ: ಬಳ್ಳಾರಿಯಲ್ಲಿ ಪೋಲೀಸ್ ಪೆಟ್ರೋಲಿಂಗ್ ವ್ಯವಸ್ಥೆ.

858 (1318)

ಶ್ರೀ ಅಲ್ಲಂ ವೀರಭದ್ರಪ್ಪ (ಕುರುಗೋಡು): ಮಾನ್ಯ ಗೃಹ ಮತ್ತು ವಕ್ಫ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಬಳ್ಳಾರಿಯಲ್ಲಿ ಹೊಯ್ಸಳ, ಗರುಡ ರೀತ್ಯಾ ಪೋಲೀಸ್ ಪೆಟ್ರೋಲಿಂಗ್ ವ್ಯವಸ್ಥೆ ಮಾಡಲಾಗಿದೆಯೇ?

2) ಹಾಗಿದ್ದಲ್ಲಿ ಈಗ ಎಷ್ಟು ಇಂತಹ ಪೆಟ್ರೋಲಿಂಗ್ ವಾಹನಗಳ ವ್ಯವಸ್ಥೆ ಮಾಡಲಾಗಿದೆ?

3) ಬಳ್ಳಾರಿ ದರೋಡೆ ಪ್ರಕರಣಗಳು ಹೆಚ್ಚಾಗುತ್ತಿರುವುದರಿಂದ ಇಂತಹ ವಾಹನಗಳ ವ್ಯವಸ್ಥೆಯನ್ನು ಹೆಚ್ಚಿನ ಸಂಖ್ಯೆಯಲ್ಲಿ ಮಾಡಲಾಗುವುದೇ?

ಶ್ರೀ ಆರ್.ರೋಷನ್ ಬೇಗ್ (ಗೃಹ ಮತ್ತು ವಕ್ಫ್ ರಾಜ್ಯ ಸಚಿವರು):

1) ಹೌದು.